Scanned

# ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಬಾಗಲಕೋಟೆ ಜಿಲ್ಲೆ ಮುಧೋಳ ತಾಲೂಕಿನ ಕಸಬಾಜಂಬಗಿ ಗ್ರಾಮದಲ್ಲಿ ಘಟಪ್ರಭಾ ನೀರಾವರಿ ಯೋಜನೆಯ ಚಿಚಕಂಡಿ ಹಂಚು ಕಾಲುವೆಯಡಿಯಲ್ಲಿ ಬರುವ ಕಸಬಾಜಂಬಗಿ ಮೈನರ್ ಕಾಲುವೆ ನಿರ್ಮಾಣಕ್ಕಾಗಿ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಭೂಸ್ವಾಧೀನ ಕಾಯ್ದೆ 2013ರ ಕಲಂ 16(6)ರ ಅಡಿಯಲ್ಲಿ ಪುನರ್‌ವಸತಿ ಮತ್ತು ಪುನರವ್ಯವಸ್ಥೆಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಉಲ್ಲೇಖ:-1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1) ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ದಿ: 1-10-2015

2}ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3} ಈ ಕಾರ್ಯಾಲಯದ ಅವಧಿ ವಿಸ್ತರಣೆ ಪತ್ರ ದಿನಾಂಕ : 3-10-2016

4}ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರ ಕಲಂ 17(2)ರಡಿ ಶಿಫಾರಸ್ಸು ದಿನಾಂಕ: 22-2-2017. ಈ ಕಛೇರಿಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಸ್ವೀಕೃತಿ ದಿ: 15-6-2017

-೦೦೦-

ಸಂ: ಆಯುಕ್ತರು/ಭೂಸ್ವಾ/ಸಿ.ಆರ್- /2016-17 |216 ದಿನಾಂಕ: 19-7-2017.

ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ **ಬಾಗಲಕೋಟೆ ಜಿಲ್ಲೆ ಮುಧೋಳ ತಾಲೂಕಿನ ಕಸಬಾಜಂಬಗಿ ಗ್ರಾಮದಲ್ಲಿ ಘಟಪ್ರಭಾ ನೀರಾವರಿ ಯೋಜನೆಯ ಚಿಚಕಂಡಿ ಹಂಚು ಕಾಲುವೆಯಡಿಯಲ್ಲಿ ಬರುವ ಕಸಬಾಜಂಬಗಿ ಮೈನರ್ ಕಾಲುವೆ ನಿರ್ಮಾಣಕ್ಕಾಗಿ** ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಪ್ರಕರಣಗಳಿಗೆ ಒಟ್ಟು **0ಎ-35ಗುಂ** ಕ್ಷೇತ್ರದ ನೂತನ ಕಾಯ್ದೆಯ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಮಲಪ್ರಭಾ ಯೋಜನೆ-3, ಬಾಗಲಕೋಟೆ ಇವರನ್ನು ಈ ಯೋಜನೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಪ್ರಕರಣ ಅಸ್ತಿತ್ವದಲ್ಲಿರುವ ಸಂದರ್ಭಗಳು ನ್ಯಾಯಯುತ ಅಭಿಪ್ರಾಯ ಹೊಂದಿರುವುದರಿಂದ ಉಲ್ಲೇಖ (3)ರಡಿ ಕಾಯ್ದೆ ಕಲಂ 19(7)ರಡಿ ಅಂತಿಮ ಅಧಿಸೂಚನೆ ಕಾಲಾವಧಿಯನ್ನು ವಿಸ್ತರಿಸಲಾಗಿದೆ

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

—2—

ನೂತನ ಭೂಸ್ವಾಧೀನ ಪುನರ್ವಸತಿ ಮತ್ತು ಪುನರ್ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಒಟ್ಟು ಕ್ಷೇತ್ರ ೦ಎ-೩೮ಗುಂ ಕ್ಷೇತ್ರದಲ್ಲಿ ಜಮೀನು ಸ್ವಾಧೀನಕ್ಕೆ ಒಳಪಡುತ್ತಿದ್ದು, ಈ ಪೈಕಿ ಒಟ್ಟು 01 ಕುಟುಂಬವು ಬಾಧಿತಗೊಳ್ಳುತ್ತಿದ್ದು, ಅವರು ಹೊಂದಿದ ಕ್ಷೇತ್ರಕ್ಕಿಂತ ಬಹುಪಾಲು ಭೂಮಿಯನ್ನು ಕಳೆದುಕೊಳ್ಳುತ್ತಿರುವುದಿಲ್ಲವಾದ್ದರಿಂದ, ಯಾವುದೇ ಕುಟುಂಬವು ಜೀವನೋಪಾಯಕ್ಕೆ ನಷ್ಟ ಹೊಂದುವುದಿಲ್ಲ ಎಂಬುವುದನ್ನು ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರು ಕೂಲಂಕುಷವಾಗಿ ಪರಿಶೀಲಿಸಿ ನೂತನ ಕಾಯ್ದೆರಡಿ ಕಲಂ 16(6)ರಡಿ ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯ ಕರಡು ಯಾದಿಯನ್ನು ತಯಾರಿಸಿ ದೃಢಪಡಿಸಿದ್ದಾರೆ.

ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರ ಶಿಫಾರಸ್ಸುಗಳನ್ನು ಆಧರಿಸಿ, ತಯಾರಿಸಿರುವ ಯಾದಿಯನ್ನು ಐತೀರ್ಪು ಸಂದರ್ಭದಲ್ಲಿ ಜೀವನಾಧಾರ ಸೌಲಭ್ಯ ಪಡೆಯುವ ಕುಟುಂಬವು ಕಳೆದುಕೊಳ್ಳುತ್ತಿರುವ ಜಮೀನು ಹೊರತು ಪಡಿಸಿ, ಇತರೆ ಪ್ರದೇಶದಲ್ಲಿ ಜಮೀನು ಅಥವಾ ಇತರೆ ಯಾವುದೇ ಆಧಾಯ ಹೊಂದಿಲ್ಲವೆಂಬುದರ ಬಗ್ಗೆ ಶಪಥ ಪತ್ರ ಹಾಗೂ ಕಂದಾಯ ದಾಖಲೆ (ಕುಟುಂಬ ಭೂ ಹಿಡುವಳಿ ಪ್ರಮಾಣ ಪತ್ರ) ಪಡೆಯುವುದು. ಹಾಗೂ ಈ ಕುರಿತು ಆಡಳಿತಾಧಿಕಾರಿಗಳು ಮತ್ತೊಮ್ಮೆ ಪರಿಶೀಲಿಸುವುದು. ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕಾಯ್ದೆ ಕಲಂ 41(6)ರಡಿ ಅನುಸೂಚಿತ ಪಂಗಡ ಹಾಗೂ ಬುಡಕಟ್ಟು ಜನಾಂಗಗಳಿಗೆ ಭೂಸ್ವಾಧೀನ ಪ್ರಕರಣಗಳು ಒಳಪಟ್ಟಿದ್ದಲ್ಲಿ ಸ್ವಾಧೀನದ ಸ್ವತ್ತುಗಳ ಶೇ. 1/3 ರಷ್ಟು ಪರಿಹಾರವನ್ನು ಸ್ವಾಧೀನ ಪೂರ್ವದಲ್ಲಿ ಬಾಧಿತ ಕುಟುಂಬಗಳಿಗೆ ಪಾವತಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ
ನವನಗರ, ಬಾಗಲಕೋಟ.

**ಇವರಿಗೆ:**

1) ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ
2) ವಿಶೇಷ ಭೂಸ್ವಾಧೀನಾಧಿಕಾರಿಗಳು, ಮಲಪ್ರಭಾ ಯೋಜನೆ-3, ಬಾಗಲಕೋಟ ಇವರಿಗೆ ಅನುಮೋದಿತ ಪ್ರಸ್ತಾವನೆಯೊಂದಿಗೆ ಸೂಕ್ತ ಕ್ರಮಕ್ಕಾಗಿ
3) ಉಪ ವಿಭಾಗಾಧಿಕಾರಿಗಳು, ಜಮಖಂಡಿ ಇವರಿಗೆ ಮಾಹಿತಿಗಾಗಿ.
4) ತಹಶೀಲ್ದಾರರು, ಮುಧೋಳ ಇವರ ಮಾಹಿತಿಗಾಗಿ.
5) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕಸಬಾಜಂಬಗಿ ತಾಲೂಕ ಮುಧೋಳ ಇವರಿಗೆ.
6) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ್, ಕಂಪ್ಯೂಟರ್ ವಿಭಾಗ, ಪು ಮತ್ತು ಪು, ಕೃಮೇಯೋ, ನವನಗರ, ಬಾಗಲಕೋಟ ಇವರಿಗೆ.
7) ಭೂಸ್ವಾಧೀನ ವಿಭಾಗಕ್ಕೆ.